ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು,ನೃಪತುಂಗ ರಸ್ತೆ, ಬೆಂಗಳೂರು–560001

ಸಂಖ್ಯೆ:ಸಿ7[2] ಪ್ರಾಶಿಅ.ಹೊ.ಶಾ..ಪ್ರಾ.ಅನು.36/2013–14 ದಿನಾಂಕ: 18.10.2013

## ಸುತ್ತೋಲೆ

ವಿಷಯ: ಶಾಶ್ವತ ಅನುದಾನ ರಹಿತ 6–8ನೇ ಮತ್ತು 9–10 ತರಗತಿಗಳಿಗೆ ಆಂಗ್ಲ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಕುರಿತು ಅನುಸರಿಸಬೇಕಾದ ಮಾರ್ಗಸೂಚಿ ಬಗ್ಗೆ.

ಉಲ್ಲೇಖ:ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ, ದಿನಾಂಕ: 16.09.2013

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖದ ಸುತ್ತೋಲೆಯಲ್ಲಿ ಹೊಸ ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸುವ ಕುರಿತು ಅನುಸರಿಸಬೇಕಾದ ಮಾರ್ಗಸೂಚಿ ವೇಳಾಪಟ್ಟಿಯನ್ನು ಹೊರಡಿಸಲಾಗಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಕಾಲದಡಿ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ: 31.10.2013 ಆಗಿರುತ್ತದೆ. ಈ ರೀತಿ ಸ್ವೀಕರಿಸಲಾದ ಅರ್ಜಿಗಳನ್ನು ವೆಬ್‌ಸೈಟ್ ವಿಳಾಸ http:// www.schooleducation.kar.nic.in ರಲ್ಲಿನ New proposal to get permission to start 6th-8th and 9-10th English medium –Data Entry screen for BEOs ಎಂಬ ಶೀರ್ಷಿಕೆಯಲ್ಲಿ ಮಾಹಿತಿಗಳನ್ನು ಆನ್‌ಲೈನ್ ಮೂಲಕ ಭರ್ತಿ ಮಾಡುವುದು. ಈಗಾಗಲೇ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವರ್ಗಾವಣೆ ತಂತ್ರಾಂಶಕ್ಕೆ ಸಂಬಂಧಿಸಿದಂತೆ ನೀಡಿರುವ ಯೂಸರ್ ಐ.ಡಿ. ಮತ್ತು ಪಾಸ್‌ವರ್ಡ್‌ನ್ನು ಈ ತಂತ್ರಾಂಶಕ್ಕೂ ಸಹ ಬಳಸುವುದು. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಸ್ವೀಕರಿಸಿದ ಪ್ರಸ್ತಾವನೆಗಳನ್ನು ದಿನಾಂಕ: 10.11.2013 ರವರೆಗೆ ಎಲ್ಲಾ ಅರ್ಜಿಗಳನ್ನು ಅಂತರ್ಜಾಲದ ಮೂಲಕ ಮೇಲೆ ಹೇಳಿರುವ ವೆಬ್‌ಸೈಟ್‌ನಲ್ಲಿ ಮಾಹಿತಿಗಳನ್ನು ಭರ್ತಿಮಾಡಿ ನೊಂದಾಯಿಸಬೇಕು. ಉಳಿದಂತೆ ಉಲ್ಲೇಖದ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕ್ರಮವಹಿಸುವುದು ಯಾವುದೇ ಬದಲಾವಣೆಗಳಿರುವುದಿಲ್ಲ.

[ಎ.ದೇವಪ್ರಕಾಶ್]
ನಿರ್ದೇಶಕರು [ಪ್ರಾಥಮಿಕ ಶಿಕ್ಷಣ]

ಗೆ,

1. ಬೆಂಗಳೂರು ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
2. ಬೆಂಗಳೂರು ಮೈಸೂರು ವಿಭಾಗದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
3. ನೋಡಲ್ ಅಧಿಕಾರಿ, ಇ-ಆಡಳಿತ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.
4. ಕಛೇರಿ ಪ್ರತಿ